95

<u>ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ರವರು ಮಂಡಿಸಿರುವ ನಿಯಮ 72 ರ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.</u>

**<u>ವಿಷಯ:</u> ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಿಂದ ಹೊರಗೆ ತೋಟ-ಗದ್ದೆಗಳಲ್ಲಿ ಗುಂಪು ಗುಂಪಾಗಿ ಮನೆ ಕಟ್ಟಿಕೊಂಡು ವಾಸಿಸುವ ಜನರಿಗೆ ಆಸ್ತಿ ತೆರಿಗೆಯೂ ಇಲ್ಲದೆ, ಇ-ಸ್ವತ್ತು ಇಲ್ಲದೇ ಮೂಲಭೂತ ಸೌಕರ್ಯಗಳು ಇಲ್ಲದೆ, ಶೋಚನೀಯ ಸ್ಥಿತಿಯಲ್ಲಿದ್ದಾರೆ. ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗಿರುವ ಇವರ ಮೂಲಭೂತ ಸಮಸ್ಯೆಗಳ ವಿಚಾರಗಳ ಬಗ್ಗೆ.**

----

<u>ಉತ್ತರ:</u> ಜನಸಂಖ್ಯೆಯ ಹೆಚ್ಚಳದಿಂದ ವಿಸ್ತಾರಗೊಂಡು ಜನರು ಗ್ರಾಮಗಳ ಸಮೀಪದ ತಮ್ಮ ತಮ್ಮ ಹೊಲ ಗದ್ದೆಗಳಲ್ಲಿ ಮನೆ ಕಟ್ಟಿಕೊಂಡು ವಾಸಿಸುತ್ತಿರುವ ಇವರಿಗೆ ಗ್ರಾಮ ಪಂಚಾಯತಿಗಳಿಂದ ಯಾವುದೇ ಮೂಲಭೂತ ಸೌಲಭ್ಯಗಳ ಅನುಕೂಲ ಇಲ್ಲದೇ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಕೃಷಿ ಜಮೀನಿನಲ್ಲಿ ನಿರ್ಮಾಣವಾಗಿರುವ ಕಟ್ಟಡಗಳಿಗೆ ಈಗಾಗಲೇ ಆಸ್ತಿ ತೆರಿಗೆ ವಿಧಿಸುವ ಬಗ್ಗೆ ದಿನಾಂಕ:24-05-2003 ರಲ್ಲಿ ಸುತ್ತೋಲೆ ಹೊರಡಿಸುವ ಮೂಲಕ ಕ್ರಮ ಕೈಗೊಳ್ಳಲಾಗಿದೆ. ಅದರಂತೆ ಇಂತಹ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ವರ್ಗಾವಣೆಗೆ ಅವಕಾಶವಿಲ್ಲದ ನಮೂನೆ-11ಬಿ ನೀಡಲಾಗುತ್ತಿದೆ.

ಗ್ರಾಮ ಪಂಚಾಯತಿಗಳು ಲಭ್ಯವಿರುವ ಅನುದಾನದಲ್ಲಿ ರಸ್ತೆ, ಕುಡಿಯುವ ನೀರು, ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿರುತ್ತಾರೆ. ಗ್ರಾಮ ಪಂಚಾಯತಿಯಿಂದ ರೈತರ ಹೊಲಗಳಿಗೆ ಹೋಗಲು ಎಮ್.ಜಿ.ಎನ್.ಆರ್.ಇ.ಜಿ.ಎ ಯೋಜನೆಯಡಿ ಶೇ. 10 ರಷ್ಟರಲ್ಲಿ ಗ್ರಾಮ ಪಂಚಾಯತಿಗಳು ರಸ್ತೆಯನ್ನು ನಿರ್ಮಾಣ ಮಾಡಬಹುದಾಗಿರುತ್ತದೆ. ರೈತರು ವಿದ್ಯುತ್ ಸಂಪರ್ಕವನ್ನು ಕಲ್ಪಿಸಿಕೊಂಡಿರುವುದರಿಂದ ಗ್ರಾಮ ಪಂಚಾಯತಿ ವತಿಯಿಂದ ಮೂಲಭೂತ ಸೌಲಭ್ಯಗಳನ್ನು ಅನುದಾನದ ಲಭ್ಯತೆಯನುಸಾರ ಕಲ್ಪಿಸಿರುತ್ತಾರೆ.

ಗ್ರಾಮ ಪಂಚಾಯತಿಗಳು ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡುವ ಅನುದಾನ, ಸ್ವಂತ ಸಂಪನ್ಮೂಲದಿಂದ ಗ್ರಾಮಠಾಣಾ ವ್ಯಾಪ್ತಿಯ ಹೊರಗಿರುವ ಕುಟುಂಬಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಳ್ಳಬಹುದಾಗಿದೆ.

ಸಂಖ್ಯೆ: ಗ್ರಾಅಪ 358 ಗ್ರಾಪಂಅ 2021

**(ಕೆ.ಎಸ್. ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು